**<u>2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು</u>**
**<u>ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ</u>**

ದಿಃ **14.12.2023** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ
ನಾನು ಈ ದಾವೆಯಲ್ಲಿ ವಾದಿಯಾಗಿದ್ದೇನೆ.

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ಮೂರು ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.1 ರಿಂದ 3 ಎಂದು, ದಿಃ 26/03/2008 ರ ಕ್ರಯ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು, ದಿಃ 07/03/2012 ರ ಭಕ್ಷಿಶ್ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.5 ಎಂದು, ಎರಡು ಮೃತರ ಕುಟುಂಬದ ಜೀವಂತ ಸದಸ್ಯರ ಪ್ರಮಾಣಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.6 ಮತ್ತು 7 ಎಂದು, ಎರಡು ಪ್ರಾಪರ್ಟಿ ಟ್ಯಾಕ್ಸ ರಜಿಸ್ಟರ್ ಗಳ ದಢಿಕೃತ ನಕಲನ್ನು ಹಾಜರಪಡಿಸಿದ್ದು ಅವುಗಳನ್ನು ನಿಪಿ.8 ಮತ್ತು 9 ಎಂದು, ಮೂರು ಹಣ ತುಂಬಿದ ರಶೀದಿಗಳನ್ನು ಹಾಜರಪಡಿಸಿದ್ದು ಅವುಗಳನ್ನು ನಿಪಿ.10 ರಿಂದ 12 ಎಂದು, ಮೃತರ ಕುಟುಂಬದ ಜೀವಂತ ಸದಸ್ಯರ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.13 ಎಂದುಗುರುತಿಸಲಾಯಿತು.

**(ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದು ಆಲಿಸಿ ಕಾಲಾವಕಾಶ ನೀಡಲಾಯಿತು)**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-
**(ಶ್ರೀಮತಿ ಪದ್ಮಶ್ರೀ ಆರ್. ಪಾಟೀಲ)**
**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ**